**9 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.**

**ಎಸ್.ಸಿ.ನಂ.120/2019**

**(ಚಾ.ಸಾ.6/ಪ್ರಾ.ಸಾ.7)**

ತಾಃ 21.08.2023 ರಂದು ಸಾಕ್ಷಿಗೆ ಪ್ರಮಾಣ ವಚನ ಮಾಡಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು: | ಅಶ್ವಥ |
| ತಂದೆಯ ಹೆಸರು | ಸೀನಪ್ಪ |
| ವಯಸ್ಸು | 35 ವರ್ಷ |
| ಉದ್ಯೋಗ | ಚಾಲಕ ವೃತ್ತಿ |
| ವಾಸ ಸ್ಥಳ | ಹಳೆಯೂರು ಗ್ರಾಮ |

**ಮುಖ್ಯ ವಿಚಾರಣೆ ಃ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ.1 ಹಾಗೂ 7 ರವರು ನನ್ನ ಸಂಬಂಧಿಕರಾಗಬೇಕು. ನ್ಯಾಯಾಲಯದ ಮುಂದೆ ಹಾಜರಿರುವ 2 ನೇ ಆರೋಪಿಯನ್ನು ನಾನು ನೋಡಿರುತ್ತೇನೆ. ಚಾಸಾ.1 ಹಾಗೂ ಆರೋಪಿತರ ನಡುವೆ ಏನು ಗಲಾಟೆ ಆಗಿರುತ್ತದೆ ಎಂದು ನನಗೆ ತಿಳಿದಿಲ್ಲ. ಸಾಕ್ಷಿದಾರರು ನಿ.ಪಿ.2 ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ.2(ಸಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಸುಮಾರು 4 ವರ್ಷದ ಹಿಂದೆ ನಂದಗುಡಿ ಪೊಲೀಸ್ ಠಾಣೆಯಲ್ಲಿ

ಮಾಡಿರುತ್ತೇನೆ. ಪೊಲೀಸರು ನನ್ನನ್ನು ಮಹಜರ್ ಗಾಗಿ ಯಾವುದೇ ಸ್ಥಳಕ್ಕೆ ಕರೆದುಕೊಂಡು ಹೋಗಿರಲಿಲ್ಲ ಹಾಗೂ ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತಿಪಡಿಸಿರಲಿಲ್ಲ. ಸಾಕ್ಷಿದಾರರು ಮು.ಮಾ.1 ಮತ್ತು 2 ರ ವಸ್ತುಗಳನ್ನು ನೋಡಿ ಅವುಗಳನ್ನು ಈ ಹಿಂದೆ ನೋಡಿರಲಿಲ್ಲ ಎಂದು ಉತ್ತರಿಸಿರುತ್ತಾರೆ. ನಿ.ಪಿ.2 ರಲ್ಲಿ ಏನು ವಿಚಾರ ಬರೆದಿರುತ್ತದೆ ಎಂದು ನನಗೆ ತಿಳಿದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಸರ್ಕಾರಿ ಅಭಿಯೋಜಕರು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ</u>

2. ದಿಃ14.10.2018 ರಂದು ಪೊಲೀಸರು 1 ನೇ ಆರೋಪಿಯ ಮನೆಯ ಮುಂಭಾಗದ ಖಾಲಿ ಜಾಗಕ್ಕೆ ಭೇಟಿ ನೀಡಿದ್ದು ಕೃತ್ಯ ಸ್ಥಳವನ್ನು ಚಾಸಾ.1 ರವರು ಪೊಲೀಸರಿಗೆ ತೋರಿಸಿದ್ದು ಸದರಿ ಸ್ಥಳದಲ್ಲಿ ನಿ.ಪಿ.2 ರಂತೆ ಬೆಳಿಗ್ಗೆ 10.00 ರಿಂದ 10.45 ರ ಸಮಯದಲ್ಲಿ ಮಹಜರ್ ಕ್ರಮ ಜರುಗಿಸಿ ನಮ್ಮ ಸಮಕ್ಷಮ ಮು.ಮಾ.1 ಮತ್ತು 2 ರ ವಸ್ತುಗಳನ್ನು ಅಮಾನತ್ತುಪಡಿಸಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ.2 ರಲ್ಲಿ ಬರೆದ ವಿಚಾರಗಳು ನನಗೆ ತಿಳಿದಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷಿ ನುಡಿದಿರುತ್ತೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿಪರ ಶ್ರೀ. ಎಮ್ ಎಸ್ ವಕೀಲರಿಂದಃ</u>

3. ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆಃ ಇಲ್ಲ.**

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ.)

ಓ. ಹೇ. ಕೇ. ಸ. ಸಹಿ ಮಾಡಿದ್ದಾರೆ.

(ಎಸ್.ಶ್ರೀಧರ)
9 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.